ದಿನಾಂಕಃ 01-09-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**<u>ಪಾಟೀ ಸವಾಲುಃ</u>- 2 ಮತ್ತು 3 ನೇ ಪ್ರತಿವಾದಿಗಳ ಪರವಾಗಿ ಶ್ರೀ.ಡಿ.ವಿ.ಎಸ್. ವಕೀಲರಿಂದಃ-**

ನನ್ನ ತಂದಗೆ ಜಯಮ್ಮ, ತಿಮ್ಮಕ್ಕ, ಶಿವಕುಮಾರ್, ರಂಗರತ್ನಮ್ಮ, ಕಾಂತಮ್ಮ ಮತ್ತು ಲೋಕೇಶ್ ಮಕ್ಕಳುಗಳಿದ್ದೇವೆ. ಅವರ ಹೆಣ್ಣು ಮಕ್ಕಳುಗಳು ಎಲ್ಲರೂ ಮದುವೆ ಮಾಡಿಕೊಂಡು ಅವರವರ ಗಂಡನ ಮನೆಯಲ್ಲಿ ವಾಸವಾಗಿದ್ದೇವೆ. ನನ್ನ ಮದುವೆ ಆಗಿ 45 ವರ್ಷಗಳಾಗಿರುತ್ತವೆ. ನನ್ನ ಮದುವೆ ಆದ ನಂತರ ನಾನು ಶಿರಾದಲ್ಲಿ ವಾಸವಾಗಿರುತ್ತೇನೆ. ಮದುವೆ ಆದ 3 ವರ್ಷಗಳ ಕಾಲ ಕೋಡಗದಾಲದಲ್ಲಿ ವಾಸವಾಗಿದ್ದೆ. ನಾನು ಕೋಡಗದಾಲದಲ್ಲಿ ವಾಸವಾಗಿದ್ದ ಬಗ್ಗೆ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ. ನನ್ನ ತಂದೆಗೆ ಪಿತ್ರಾರ್ಜಿತವಾಗಿ ಬಂದ ಆಸ್ತಿಗಳ ಸರ್ವೇ ನಂಬರ್, ವಿಸ್ತೀರ್ಣ ಮತ್ತು ಅವು ಯಾವ ಊರಿನಲ್ಲಿವೆ ಎಂದು ನನಗೆ ಗೊತ್ತಿಲ್ಲ. ನನ್ನ ತಂದೆಗೆ ಪಿತ್ರಾರ್ಜಿತವಾಗಿ ಬಂದ ಆಸ್ತಿಗಳ ಬಗ್ಗೆ ದಾಖಲೆಗಳನ್ನು ನಾನು ಕೊಟ್ಟಿರುವುದಿಲ್ಲ. ನನ್ನ ತಂದೆ ವ್ಯವಸಾಯ ಮಾಡುತ್ತಿದ್ದರು. ನನ್ನ ತಂದೆಗೆ ಎಷ್ಟು ವರಮಾನ ವ್ಯವಸಾಯದಿಂದ ಬರುತ್ತಿತ್ತು ಎಂಬುದು ನನಗೆ ಗೊತ್ತಿಲ್ಲ. ನನ್ನ ತಂದೆ ಮೃತಪಟ್ಟು ಸುಮಾರು 30 ವರ್ಷಗಳಾಗಿರುತ್ತವೆ. ದಾವಾ ಆಸ್ತಿಗಳು ನಮ್ಮ ಹೆಸರಿನಲ್ಲಿ ಜಂಟಿಯಾಗಿ ಬರುತ್ತಿರುವ ಬಗ್ಗೆ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ದಾವಾ ಆಸ್ತಿಗಳಲ್ಲಿ ನಾವು ಜಂಟಿ ಸ್ವಾಧೀನ ಹೊಂದಿರುವ

ಬಗ್ಗೆ ಯಾವುದೇ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ಸಾಕ್ಷಿಯು ಜಂಟಿಯಾಗಿ ಅನುಭವಿಸುತ್ತಿದ್ದೇವೆ ಎಂದು ಸ್ವತಃ ನುಡಿಯುತ್ತಾರೆ.

ನನ್ನ ತಂದೆಗೆ ಯಾವುದೇ ಪಿತ್ರಾರ್ಜಿತವಾದ ಆಸ್ತಿಗಳು ಇರಲಿಲ್ಲ ಎಂದರೆ ಸರಿಯಲ್ಲ. ನಾನು ಮತ್ತು 1 ನೇ ಪ್ರತಿವಾದಿ ವಿಶ್ವಾಸದಿಂದ ಇದ್ದೇವೆ. ಅದೇ ರೀತಿ 1 ಮತ್ತು 2 ನೇ ಪ್ರತಿವಾದಿಗಳು ಬೇರೆ ಬೇರೆ ವಾಸವಾಗಿದ್ದಾರೆ ಎಂದರೆ ಸರಿಯಲ್ಲ. 1 ಮತ್ತು 2 ನೇ ಪ್ರತಿವಾದಿಗಳು ಒಂದೇ ಮನೆಯಲ್ಲಿ ವಾಸವಾಗಿರುವ ಬಗ್ಗೆ ಮನೆ ನಂಬರ್ ಮತ್ತು ಚಕ್ಕುಬಂಧಿ ನನಗೆ ಗೊತ್ತಿಲ್ಲ. ನಾನು 2-3 ತಿಂಗಳ ಹಿಂದೆ ಕೋಡಗದಾಲ ಗ್ರಾಮಕ್ಕೆ ಹೋಗಿದ್ದೆನು. ನನ್ನ ತಾಯಿ ಲಕ್ಷ್ಮೀದೇವಮ್ಮನವರು ಹೊಗೆಸೊಪ್ಪು ವ್ಯಾಪಾರ ಮಾಡುತ್ತಿದ್ದರು ಎಂದರೆ ಸರಿಯಲ್ಲ. ನನ್ನ ತಾಯಿ ಹೊಗೆಸೊಪ್ಪು ವ್ಯಾಪಾರದಿಂದ ಬಂದ ಆದಾಯದಲ್ಲಿ ದಾವಾ ಸ.ನಂ.55, 45/2 ಮತ್ತು 46 ರ ಆಸ್ತಿಗಳನ್ನು ಖರೀದಿಸಿದ್ದರು ಎಂದರೆ ಸರಿಯಲ್ಲ. ಈ ಮೇಲೆ ಹೇಳಿದ ಮೂರು ಜಮೀನುಗಳನ್ನು ನನ್ನ ತಂದೆಯವರು ನನ್ನ ತಾಯಿಯ ಹೆಸರಿನಲ್ಲಿ ಖರೀದಿಸಿರುವ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ನನ್ನ ಮದುವೆ 1977 ರಲ್ಲಿ ಆಗಿರಬಹುದು. ನನ್ನ ತಾಯಿ ದಿಃ 14.05.1971 ಮತ್ತು 02.02.1972 ರಂದು ಸ.ನಂ.45/2 ಮತ್ತು 46 ರ ಜಮೀನನ್ನು ಖರೀದಿಸಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ತಂದೆಯ ತಾಯಿ ಅಂದರೆ ನನ್ನ ಅಜ್ಜಿಯನ್ನು ನಾನು ನೋಡಿರುವುದಿಲ್ಲ. ನನ್ನ ಅಜ್ಜಿ ಮತ್ತು ತಾತ ಸ.ನಂ.1 ರ ಆಸ್ತಿಯನ್ನು ನನ್ನ ತಾಯಿಯ ಹೆಸರಿಗೆ ಅರಿಶಿನ

ಕುಂಕುಮಕ್ಕಾಗಿ ಖರೀದಿ ಮಾಡಿಕೊಟ್ಟಿದ್ದರು ಎಂದರೆ ಸರಿಯಲ್ಲ. ಸ.ನಂ.1 ರ ಆಸ್ತಿ ನನ್ನ ತಾಯಿಯ ಹೆಸರಿಗೆ ಹೇಗೆ ಬಂತು ಎಂಬುದು ನನಗೆ ಗೊತ್ತಿಲ್ಲ.

1 ಮತ್ತು 2 ನೇ ಪ್ರತಿವಾದಿಗಳು ಈ ಹಿಂದೆಯೇ ಬಾಯಿ ಮಾತಿನ ಮೂಲಕ ವಿಭಾಗ ಮಾಡಿಕೊಂಡಿದ್ದಾರೆ ಎಂದರೆ ಸರಿಯಲ್ಲ. ಅದರಂತೆ 1 ಮತ್ತು 2 ನೇ ಪ್ರತಿವಾದಿಗಳು ಬೇರೆ ಬೇರೆ ಆಸ್ತಿಗಳಲ್ಲಿ ಸ್ವಾಧೀನ ಹೊಂದಿದ್ದಾರೆ ಎಂದರೆ ಸರಿಯಲ್ಲ. ಈ ದಾವೆ ಸಲ್ಲಿಸುವ ಕಾಲಕ್ಕೆ ಯಾವುದೇ ಒಟ್ಟು ಕುಟುಂಬ ಅಸ್ತಿತ್ವದಲ್ಲಿಲ್ಲ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿ ಅಡಕೆ ಮತ್ತು ತೆಂಗಿನ ವ್ಯಾಪಾರ ಮಾಡುತ್ತಾರೆ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿ ದಿಃ 08.09.2000 ಮತ್ತು 22.04.2001 ರಲ್ಲಿ ಒಂದು ಜಮೀನನ್ನು ಖರೀದಿಸಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ಕುಟುಂಬದ ಜಮೀನುಗಳಲ್ಲಿ ವರ್ಷಕ್ಕೆ ಎಷ್ಟು ಆದಾಯ ಬರುತ್ತಿದೆ ಮತ್ತು ಯಾವ ಜಮೀನಿನಿಂದ ಆದಾಯ ಬರುತ್ತಿದೆ ಎಂಬುದು ನನಗೆ ಗೊತ್ತಿಲ್ಲ. ಸ.ನಂ.45/2 ರ ಜಮೀನಿನಲ್ಲಿ 1 ಎಕರೆ 17 ಗುಂಟೆ ಜಮೀನನ್ನು 1 ನೇ ಪ್ರತಿವಾದಿ ಅನುಭವಿಸುತ್ತಿದ್ದಾರೆ ಎಂದರೆ ಸರಿಯಲ್ಲ. ಅದೇ ರೀತಿ ಸ.ನಂ.63/2, 64/2, 64/3, 43/14, 63/1, 63/3, 64/1 ರ ಜಮೀನುಗಳಲ್ಲಿ ಅವರವರ ಹಿಸ್ಸೆಗೆ ಅನುಗುಣವಾಗಿ ವ್ಯವಸಾಯ ಮಾಡಿಕೊಂಡು ಬರುತ್ತಿದ್ದಾರೆ ಎಂದರೆ ಸರಿಯಲ್ಲ. ಅದೇ ರೀತಿ 2 ನೇ ಪ್ರತಿವಾದಿಯೂ ಸಹ ಸ.ನಂ.55, 42/2, 46, 66/1, 65, 66/3, 73/1, 44/1, 44/1 ಬಿ, 45/3, 42, 36, 37, 38, 41 ಮತ್ತು 42 ರ

ಜಮೀನುಗಳಲ್ಲಿ ಸ್ವಾಧೀನ ಹೊಂದಿ ವ್ಯವಸಾಯ ಮಾಡಿಕೊಂಡು ಬರುತ್ತಿದ್ದಾರೆ ಎಂದರೆ ಸರಿಯಲ್ಲ.

ನಿಪಿ.10 ರಿಂದ 12 ರ ದಾಖಲೆಗಳಲ್ಲಿರುವ ಆಸ್ತಿಗಳನ್ನು 2 ನೇ ಪ್ರತಿವಾದಿ ಅನುಭವಿಸಿಕೊಂಡು ಬರುತ್ತಿದ್ದಾರೆ ಎಂದರೆ ಸರಿ. ಸಾಕ್ಷಿಯು ಅವರುಗಳ ಹೆಸರಿಗೆ ಮಾಡಿಸಿಕೊಂಡಿದ್ದಾರೆ ಎಂದು ಸ್ವತಃ ನುಡಿಯುತ್ತಾರೆ. ಅದೇ ರೀತಿ 1 ನೇ ಪ್ರತಿವಾದಿ ಅವರ ಹಿಸ್ಸೆಗೆ ಬಂದ ಆಸ್ತಿಗಳನ್ನು ದಾಖಲೆ ಮಾಡಿಸಿಕೊಂಡು ಸ್ವಾಧೀನ ಹೊಂದಿದ್ದಾರೆ ಎಂದರೆ ಸರಿ. ಸಾಕ್ಷಿಯು ಅವರುಗಳೇ ಅವರ ಹೆಸರಿಗೆ ಮಾಡಿಸಿಕೊಂಡಿದ್ದಾರೆ ಎಂದು ಸ್ವತಃ ನುಡಿಯುತ್ತಾರೆ. ನಮ್ಮ ಕುಟುಂಬದಲ್ಲಿ ಒಟ್ಟು ಕುಟುಂಬ ಅಸ್ತಿತ್ವದಲ್ಲಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಗಳಲ್ಲಿ ಈ ದಾವಾ ಸಲ್ಲಿಸುವ ಕಾಲಕ್ಕೆ ವಿಭಾಗ ಅಸ್ತಿತ್ವದಲ್ಲಿರುವುದಿಲ್ಲ, ಪ್ರತಿವಾದಿಗಳಿಗೆ ತೊಂದರೆ ಕೊಡುವ ಉದ್ದೇಶದಿಂದ ಈ ಸುಳ್ಳು ದಾವಾ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಮ್ಮ ತಂದೆ ಮೃತಪಟ್ಟ ನಂತರ ದಾವಾ ಆಸ್ತಿಗಳಲ್ಲಿ ನಮ್ಮ ಹೆಸರುಗಳನ್ನು ಜಂಟಿಯಾಗಿ ನಮೂದಿಸುವಂತೆ ಸಂಬಂಧಪಟ್ಟ ಇಲಾಖೆಗೆ ಅರ್ಜಿ ಸಲ್ಲಿಸಿರುವುದಿಲ್ಲ. ಸಾಕ್ಷಿಯು ನಮಗೆ ಗೊತ್ತಿರದ ಹಾಗೆ ಮಾಡಿಸಿಕೊಂಡಿದ್ದಾರೆ ಎಂದು ಸ್ವತಃ ನುಡಿಯುತ್ತಾರೆ. ದಾವಾ ಆಸ್ತಿಗಳ ದಾಖಲೆಗಳು 1 ಮತ್ತು 2 ನೇ ಪ್ರತಿವಾದಿಗಳ ಹೆಸರಿನಲ್ಲಿರುವ ವಿಚಾರ ಈ ದಾವೆ ಸಲ್ಲಿಸುವುದಕ್ಕಿಂತ ಮೊದಲು ನನಗೆ ಗೊತ್ತಾಯಿತು. ಪ್ರತಿವಾದಿ 1 ಮತ್ತು 2 ರವರ ಹೆಸರಿನಲ್ಲಿರುವ ದಾಖಲೆಗಳನ್ನು ಪ್ರಶ್ನಿಸಿ ನಾನು ಯಾವುದೇ

ನ್ಯಾಯಾಲಯದ ಮುಂದೆ ಮೇಲ್ಮನವಿ ಸಲ್ಲಿಸಿರುವುದಿಲ್ಲ. ದಾವಾ ಆಸ್ತಿಗಳು ಒಟ್ಟು ಕುಟುಂಬದ ಆಸ್ತಿಗಳಲ್ಲ, ಅದೇ ರೀತಿ ಹಿಸ್ಸೆ ಮಾಡಲು ಉಳಿದಿರುವುದಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ- ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ